**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.647/2021**

ಪಿ.ಡಬ್ಲ್ಯೂ: 2

ಸಿ.ಡಬ್ಲ್ಯೂ: 2

ಸಾಕ್ಷಿದಾರರ ಹೆಸರು : ಶಿವರಾಮ್

ತಂದೆಯ ಹೆಸರು : ವೆಂಕಟಯ್ಯ

ವಯಸ್ಸು : 54 ವರ್ಷ

ಉದ್ಯೋಗ : ಕೂಲಿ

ವಾಸಸ್ಥಳ : ಮುಡುಗೋಡು

**ದಿನಾಂಕ: 15-04-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

2018 ರಲ್ಲಿ ಚಾಸಾ-1 ರವರ ಮನೆಯಲ್ಲಿ ಆದ ಕಳ್ಳತನದ ವಿಚಾರವಾಗಿ ಪೋಲೀಸರು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2 (ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮು.ಮಾ.1 ನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಗೆ ನಿಪಿ-3 ರ ಛಾಯಾಚಿತ್ರವನ್ನು ತೋರಿಸಿದ್ದು ಅದರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.**

ನಿಮಗೆ ಕನ್ನಡ ಓದಲು-ಬರೆಯಲು ಬರುವುದಿಲ್ಲ ಎಂದರೆ ಸರಿ. ನೀವು ಸಹಿ ಮಾಡಿದ ಮಹಜರ್ ನಲ್ಲಿ ಏನು ಬರೆದಿದೆ ಎಂಬುದರ ಬಗ್ಗೆ ನಿಮಗೆ ತಿಳುವಳಿಕೆ ಇರಲಿಲ್ಲ ಎಂದರೆ ಸರಿಯಲ್ಲ. ನಿಮ್ಮ ಮುಂದೆ ಯಾವುದೇ ವರದಿಯನ್ನು ಬರೆದುಕೊಳ್ಳಲಿಲ್ಲ ಎಂದರೆ ಸರಿ, ಸಾಕ್ಷಿಯು ಮುಂದುವರಿದು ನಾನು ಅದಕ್ಕೆ ಸಹಿ ಮಾತ್ರ ಮಾಡಿರುತ್ತೇನೆ. ವರದಿಯನ್ನು ಮುಂಚೆಯೇ ಬರೆದಿರುತ್ತಾರೆ ಎಂದು ನುಡಿದಿರುತ್ತಾರೆ. ನೀವು ಸಹಿ ಮಾಡಲು ಹೋದಾಗ ಘಟನೆ ನಡೆದ ಮನೆಯಅಸೆಸ್ಮೆಂಟ್ ನಂಬರ್ ನಿಮಗೆ ತಿಳಿದಿತಾ? ಎಂದರೆ ಸಾಕ್ಷಿಯು ಅದು ಬೀರಣ್ಣನವರ ಮನೆಯಾಗಿದ್ದು ಅದರಲ್ಲಿ ಚಾಸಾ-1 ರವರು ಬಾಡಿಗೆ ಇದ್ದರು ಎಂದು ನುಡಿಯುತ್ತಾರೆ. ಸಾಕ್ಷಿಗೆ ಘಟನೆ ನಡೆದ ಮನೆಯ ಚಕ್ಕುಬಂದಿ ಹೇಳಲು ಸಾಧ್ಯವಾಗುತ್ತದಾ? ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿದಿರುತ್ತಾರೆ. ಮು.ಮಾ.1 ನ್ನು ಸಾಕ್ಷಿಗೆ ತೋರಿಸಿದ್ದು ಇದೇ ರೀತಿಯ ಬೀಗವು ಎಲ್ಲಾ ಅಂಗಡಿಗಳಲ್ಲೂ ಸಿಗುತ್ತದೆ ಎಂದರೆ, ಸಾಕ್ಷಿಯು ಸಿಗುತದೆ ಎಂದು ನುಡಿಯುತ್ತಾರೆ. ಪೋಲೀಸರು

ನಿಮಗೆ ಮಹಜರ್ ನೋಟೀಸು ಕೊಟ್ಟು ಕರೆದರಾ? ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ನೀವು ಘಟನಾ ಸ್ದಳಕ್ಕೆ ಹೋಗಿರುವುದಿಲ್ಲ ಮತ್ತು ಯಾವುದೇ ಸಹಿಯನ್ನು ಮಾಡಿರುವುದಿಲ್ಲ ಎಂದರೆ ಸಾಕ್ಷಿಯು ನಾನು ಘಟನಾ ಸ್ದಳಕ್ಕೆ ಹೋಗಿದ್ದು, ಅಲ್ಲಿ ಸಹಿ ಮಾಡಿರುತ್ತೇನೆ ಎಂದು ನುಡಿದಿರುತ್ತಾರೆ. ನಿಮ್ಮ ಮುಂದೆ ಯಾವುದೇ ಬೀಗವನ್ನು ಪೋಲೀಸರು ವಶಪಡಿಸಿಕೊಂಡಿಲ್ಲ ಎಂದರೆ, ಸಾಕ್ಷಿಯು ಇಲ್ಲ, ಅಲ್ಲಿದ್ದ ಬೀಗವನ್ನು ಪೋಲೀಸರು ವಶಪಡಿಸಿಕೊಂಡಿರುತ್ತಾರೆ ಎಂದು ನುಡಿಯುತ್ತಾರೆ. ನಿಮಗೆ ಯಾವುದೇ ವಿಚಾರ ತಿಳಿದಿಲ್ಲದಿದ್ದರೂ ಸಹ ಚಾಸಾ-*1* ರವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಾ ಎಂದರೆ ಸರಿಯಲ್ಲ. ಸಾಕ್ಷಿಗೆ ತೋರಿಸಿದ ನಿಪಿ-*3* ರಲ್ಲಿ ನೀವು ಇಲ್ಲದಿದ್ದರೂ ಆ ಛಾಯಾಚಿತ್ರದಲ್ಲಿ ಇರುವುದು ನಾನೇ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಾ ಎಂದರೆ, ಸಾಕ್ಷಿಯು ಇಲ್ಲ ಸದರಿ ಛಾಯಾಚಿತ್ರದಲ್ಲಿ ಇರುವುದು ನಾನೇ ಎಂದು ನುಡಿಯುತ್ತಾರೆ.

**<u>ಮರು ವಿಚಾರಣೆಃ ಇರುವುದಿಲ್ಲ.</u>**

***(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)***

***ಓ. ಕೇ. ಸ. ಇ. ಎ. ಒ.***

ಸಹಿ/-

***ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು***

***ಪ್ರ.ದ.ನ್ಯಾ.ದಂ.ರವರು,ತರೀಕೆರೆ.***